ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 26–11–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೊದ್ಯೋಗ ಮಂಡಳ ಅಧ್ಯಕ್ಷರ ಅಧಿಕಾರ ಸ್ವೀಕಾರ ಮತ್ತು ಪತ್ರಿಕಾಗೋಷ್ಠಿ:<br>ಶ್ರೀ ಲಕ್ಷ್ಮಣ ರಾವ್ ಚಿಂಗ್ಲೆ ಬಿನ್ ಅಜ್ಜಪ್ಪ | 27–11–2014<br>ಗುರುವಾರ<br>ಬೆಳಗ್ಗೆ<br>10–00 ಗಂಟೆಗೆ | ಖಾದಿ ಭವನ,<br>ನಂ. 10. ಜಸ್ಮಾ ಭವನ ರಸ್ತೆ,<br>ಬೆಂಗಳೂರು –560 052 |
| 2 | ಅಧಿಕಾರ ಸ್ವೀಕಾರ:<br>ಶ್ರೀಮತಿ ವಾಸಂತಿ ಶಿವಣ್ಣ ಅವರು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸುವ ಕಾರ್ಯಕ್ರಮ | 27–11–2014<br>ಗುರುವಾರ<br>ಬೆಳಗ್ಗೆ<br>10–30 ಗಂಟೆಗೆ | ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ,<br>6 ನೇ ಮಹಡಿ,<br>ಜಯನಗರ ವಾಣಿಜ್ಯ ಸಂಕೀರ್ಣ<br>4ನೇ ಬ್ಲಾಕ್,<br>ಜಯನಗರ, ಬೆಂಗಳೂರು–11 |
| 3 | ಸೇವಾ ನಿರತ ಪೊಲೀಸ್ ಅಧಿಕಾರಿಗಳ ತರಬೇತಿ ಕೇಂದ್ರ ಉದ್ಘಾಟನೆ:<br>ಶ್ರೀ ಕೆ.ಜೆ. ಜಾರ್ಜ್,<br>ಗೃಹ ಸಚಿವರು, ಕರ್ನಾಟಕ<br><br>ಸಂಪರ್ಕ:<br>ಶ್ರೀ ಕೆ.ಡಿ. ಮಲ್ಲಿಗ್‌ವಾಡ್, ಎಸ್.ಪಿ.<br>(ಪಿ.ಡಿ.ಎಂ.ಎಸ್)<br>94808 00318<br><br>ಈ ಕಾರ್ಯಕ್ರಮಕ್ಕೆ ಬೆಂಗಳೂರು ಪ್ರೆಸ್‌ಕ್ಲಬ್ ಆವರಣದಿಂದ ವಾಹನ ವ್ಯವಸ್ಥೆ ಏರ್ಪಡಿಸಲಾಗಿದೆ. ವಾಹನವು ಅಂದು ಮಧ್ಯಾಹ್ನ 2–30 ಗಂಟೆಗೆ ನಿಗದಿತ | 27–11–2014<br>ಗುರುವಾರ<br><br>ಸಂಜೆ<br>3–30 ಗಂಟೆಗೆ | ಪೊಲೀಸ್ ವಾಹನ ಚಾಲನಾ ಮತ್ತು ಸಂರಕ್ಷಣಾ ಶಾಲೆ,<br>ಪಿ.ಸಿ.ಎಮ್.ಎಸ್.<br>ಯಲಹಂಕ<br>(ಬಿ.ಎಸ್.ಎಫ್ ತರಬೇತಿ ಕೇಂದ್ರ ಸಮೀಪ) |

| | | | |
|---|---|---|---|
| | ಸ್ಥಳದತ್ತ ತೆರಳಲಿದೆ. | | |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

### ಮಹಾರಾಣಿ ಕಲಾ ಕಾಲೇಜಿಗೆ ಬೆಳ್ಳಿಹಬ್ಬದ ಸಂಭ್ರಮ:

# ಹಳೇ ವಿದ್ಯಾರ್ಥಿನಿಯರ ಸಮಾಗಮ

ಬೆಂಗಳೂರು, 26 ನೇ ನವೆಂಬರ್ (ಕರ್ನಾಟಕ ವಾರ್ತೆ)

ಬೆಂಗಳೂರಿನ ಮಹಾರಾಣಿ ಕಲಾ, ವಾಣಿಜ್ಯ ಮತ್ತು ನಿರ್ವಹಣಾ ಮಹಾವಿದ್ಯಾಲಯವು ಆರಂಭಗೊಂಡು 25 ವರ್ಷ ಕಳೆದಿದೆ. ಈಗ ಕಾಲೇಜಿಗೆ ಬೆಳ್ಳಿಹಬ್ಬದ ಸಂಭ್ರಮ. ಈ ಕಾಲೇಜಿನಲ್ಲಿ ವಿದ್ಯಾರ್ಜನೆ ಮಾಡಿದ ಹಲವಾರು ವಿದ್ಯಾರ್ಥಿನಿಯರು ರಾಜ್ಯ, ದೇಶ ಹಾಗೂ ವಿಶ್ವದೆಲ್ಲೆಡೆ ವಿವಿಧ ರಂಗಗಳಲ್ಲಿ ವಿಜೃಂಭಿಸುತ್ತಿದ್ದಾರೆ.

ಬೆಳ್ಳಿ ಹಬ್ಬದ ಸಂಭ್ರಮವು ಬರುವ 2015 ರ ಫೆಬ್ರವರಿಯಲ್ಲಿ ನಡೆಸಲು ಉದ್ದೇಶಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ವಿದ್ಯಾಭ್ಯಾಸ ಮಾಡಿರುವ ಹಳೆಯ ವಿದ್ಯಾರ್ಥಿನಿಯರೆಲ್ಲ ಒಟ್ಟುಗೂಡಿ ಬೆಳ್ಳಿಹಬ್ಬವನ್ನು ಸಡಗರ ಸಂಭ್ರಮದಿಂದ ಯೋಜಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಡಿಸೆಂಬರ್ 7ರ ಭಾನುವಾರ ಬೆಳಗ್ಗೆ 11-00 ಗಂಟೆಗೆ ಬೆಂಗಳೂರು ಶೇಷಾದ್ರಿ ರಸ್ತೆಯಲ್ಲಿರುವ ಮಹಾರಾಣಿ ಮಹಿಳಾ ಕಲಾ ವಾಣಿಜ್ಯ ಮತ್ತು ನಿರ್ವಹಣಾ ಮಹಾವಿದ್ಯಾಲಯದ ಮುಖ್ಯ ಕಟ್ಟಡದ ಎರಡನೇ ಮಹಡಿಯಲ್ಲಿರುವ ರಾಣಿ ಚೆನ್ನಮ್ಮ ಸಭಾಂಗಣದಲ್ಲಿ ಹಳೆ ವಿದ್ಯಾರ್ಥಿನಿಯರ ಸಮಾಗಮ-2014 ಸಭೆಯನ್ನು ಕರೆಯಲಾಗಿದೆ. ಕಾಲೇಜಿನಲ್ಲಿ ಅಭ್ಯಸಿಸಿದ ಎಲ್ಲ ವಿದ್ಯಾರ್ಥಿನಿಯರು ಈ ಸಭೆಗೆ ಹಾಜರಾಗಿ ಬೆಳ್ಳಿ ಹಬ್ಬದ ಆಚರಣೆಯಲ್ಲಿ ಹಳೆಯ ವಿದ್ಯಾರ್ಥಿನಿಯರು ವಹಿಸಬಹುದಾದ ಪಾತ್ರ ಜೊತೆಗೆ ಸಲಹೆ, ಸಮಾಲೋಚನೆ, ಸಹಕಾರ, ನಿರ್ದೇಶನ ಮತ್ತು ಧನಾತ್ಮಕ ಚಿಂತನೆಗಳು-ಆಲೋಚನೆಗಳನ್ನು ಅಭಿಪ್ರಾಯ ವಿನಿಮಯ ಮಾಡಿಕೊಳ್ಳಲು ಆಗಮಿಸಲು ನಿಶ್ಚಯಿಸಲಾಗಿದೆ.

ಹೆಚ್ಚಿನ ವಿವರಗಳಿಗೆ ಕಾಲೇಜಿನ ಡಾ: ಕೆ. ರಾಮಚಂದ್ರ,- 8197084806- drkrc@rediffmail.com, ಪ್ರೊ. ಎಂ. ಈಶ್ವರಪ್ಪ 98447 79946, eshwar.epss@gmail.com, ಡಾ: ಲಕ್ಷ್ಮಿ ಟಿ. -9448841323 mrs.lakshmi_t@rediffmail.com, ಪ್ರೊ. ಮಾಧವಿ ಕೆ. 8105606598 kudumula.madhavi@ymail.com ಹಾಗೂ ಪ್ರೊ. ಕೆ.ವಿ. ನಾರಾಯಣಸ್ವಾಮಿ – 9538955688 knnswamy18@gmail.com ಇವರುಗಳನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆಯಬಹುದೆಂದು ಕಾಲೇಜಿನ ಪ್ರಾಂಶುಪಾಲರು ವಿನಂತಿಸಿದ್ದಾರೆ.

ಹೆಚ್‌ಬಿಡಿ/ ಬಾಬು/ಕೆಎಂ

## ನ. 30 ರೊಳಗೆ ಕಬ್ಬು ಅರೆಯುವ ಪ್ರಕ್ರಿಯೆ ಆರಂಭಿಸಿ: ಇಲ್ಲವೆ ಕಾರ್ಖಾನೆ ವಶಕ್ಕೆ

. –ಸಚಿವ ಮಹದೇವಪ್ರಸಾದ್

ಬೆಂಗಳೂರು, 26 ನೇ ನವೆಂಬರ್ (ಕರ್ನಾಟಕ ವಾರ್ತೆ)

ಕಳೆದ ಸಾಲಿನಲ್ಲಿ ಘೋಷಿಸಿದ್ದ ಕಬ್ಬಿನ ಬೆಲೆಯನ್ನು ಎಲ್ಲ ಸಕ್ಕರೆ ಕಾರ್ಖಾನೆಗಳು ಪ್ರತಿ ಟನ್ನಿಗೆ ಪಾವತಿಸಬೇಕಿರುವ ರೂ. 2500/- ರ ಪೈಕಿ 2100/ ರೂ.ಗಳನ್ನು ನವೆಂಬರ್ 30 ರ ಒಳಗಾಗಿ ಕಬ್ಬು ಬೆಳೆಗಾರರಿಗೆ ಪಾವತಿಸಬೇಕೆಂದು ಸಹಕಾರ ಹಾಗೂ ಸಕ್ಕರೆ ಸಚಿವ ಶ್ರೀ ಮಹದೇವಪ್ರಸಾದ್ ಅವರು ತಿಳಿಸಿದರು.

ವಿಧಾನ ಸೌಧದ ಸಮ್ಮೇಳನ ಕೊಠಡಿಯಲ್ಲಿ ಇಂದು ಪತ್ರಕರ್ತರೊಂದಿಗೆ ಮಾತನಾಡಿದ ಅವರು ನವೆಂಬರ್ 30 ರ ಒಳಗಾಗಿ ಎಲ್ಲ ಕಬ್ಬು ಕಾರ್ಖಾನೆಗಳು ಕಬ್ಬು ಅರಿಯುವ ಪ್ರಕ್ರಿಯೆಯನ್ನು ಕಡ್ಡಾಯವಾಗಿ ಪ್ರಾರಂಭಿಸಬೇಕೆಂದರು. ಕಾರ್ಖಾನೆ ಪ್ರಾರಂಭಿಸಿದ ಒಂದು ತಿಂಗಳ ಒಳಗಾಗಿ ಪ್ರತಿ ಟನ್ ಕಬ್ಬಿಗೆ 200 ರೂ.ಗಳನ್ನು ಪಾವತಿಸಬೇಕೆಂದ ಸಚಿವರು ಆಗ ಪ್ರತಿ ಟನ್ನಿಗೆ ರೂ. 2300/- ಗಳನ್ನು ರೈತರಿಗೆ ಪಾವತಿಸಿದಂತಾಗುತ್ತದೆ ಎಂದರು. ಉಳಿದ 200 ರೂ.ಗಳನ್ನು ಕಬ್ಬು ಅರೆಯುವ ಕಾರ್ಖಾನೆಗಳು ರೈತರಿಗೆ ಎರಡು ವರ್ಷಗಳಲ್ಲಿ ಪಾವತಿಸಬೇಕು ಎಂದ ಸಕ್ಕರೆ ಸಚಿವರು ಹೀಗೆ ಪಾವತಿಸುವ ಸಕ್ಕರೆ ಕಾರ್ಖಾನೆಗಳಿಗೆ ಖರೀದಿ ತೆರಿಗೆ, ಪ್ರವೇಶ ತೆರಿಗೆ, ಮೌಲ್ಯವರ್ಧಿತ ತೆರಿಗೆಗಳಲ್ಲಿ ಸರ್ಕಾರ ವಿನಾಯಿತಿ ನೀಡುವುದು ಎಂದರು.

ಒಂದು ವೇಳೆ ಸಕ್ಕರೆ ಕಾರ್ಖಾನೆ ಮಾಲೀಕರು ಈ ವಿಚಾರಗಳಿಗೆ ಸ್ಪಂಧಿಸದಿದ್ದಲ್ಲಿ ಸಕ್ಕರೆ ಕಾರ್ಖಾನೆಗಳನ್ನು ಸರ್ಕಾರ ವಶಕ್ಕೆ ಪಡೆದು ಕಬ್ಬು ಅರೆಯುವ ಕೆಲಸ ಮಾಡಲಿದೆ ಎಂದರು. ಸಧ್ಯ ರಾಜ್ಯದಲ್ಲಿ 30 ಸಕ್ಕರೆ ಕಾರ್ಖಾನೆಗಳು ಕಬ್ಬು ಅರೆಯುವ ಪ್ರಕ್ರಿಯೆಯಲ್ಲಿ ಸಕ್ರೀಯವಾಗಿದ್ದು 30 ಲಕ್ಷ ಮೆಟ್ರಿಕ್ ಟನ್ ಕಬ್ಬು ಅರೆಯಲಾಗಿದೆ ಎಂದ ಸಚಿವರು 4 ಕಾರ್ಖಾನೆಗಳನ್ನು ಹೊರತುಪಡಿಸಿದರೆ ಬೇರೆ ಕಾರ್ಖಾನೆಗಳು ರೈತರಿಗೆ ಪೂರ್ಣ ಬಾಕಿ ಹಣ ಪಾವತಿಸಿಲ್ಲ ಎಂದರು.

ಬಾಬು/ಕೆಪಿಪಿ/ ಕೆಎಂ

ಛಾಯಾಚಿತ್ರ ಶೀರ್ಷಿಕೆ:

ಬೆಂಗಳೂರಿನ ಭಾರತೀಯ ಸಾರ್ವಜನಿಕ ಆಡಳಿತ ಸಂಸ್ಥೆಯ ವಜ್ರಮಹೋತ್ಸವ ಸಮಾರಂಭವನ್ನು ರಾಜ್ಯ ಉಚ್ಚನ್ಯಾಯಾಲಯದ ನ್ಯಾಯಮೂರ್ತಿ ಶ್ರೀ ಎನ್. ಕುಮಾರ್ ಅವರು ಉದ್ಘಾಟಿಸಿದರು. ವೇದಿಕೆಯಲ್ಲಿ ಸಂಸ್ಥೆಯ ಮುಖ್ಯಸ್ಥ ಶ್ರೀ ಎಸ್. ರಾಮನಾಥನ್ ಮತ್ತು ಸಂಸ್ಥೆಯ ಉಪಾಧ್ಯಕ್ಷ ಶ್ರೀ ಎಸ್.ವಿ. ರಂಗನಾಥ್ ಅವರು ಉಪಸ್ಥಿತರಿದ್ದರು.

## ಅಧಿಕಾರ ಸ್ವೀಕಾರ

**ಬೆಂಗಳೂರು, 26 ನೇ ನವೆಂಬರ್ (ಕರ್ನಾಟಕ ವಾರ್ತೆ)**

ಶ್ರೀಶೈಲ ಎಂ ದಳವಾಯಿ, ಬಿನ್ ಶ್ರೀ ಮುರಾರಿ ದಳವಾಯಿ, ಕುಡಚಿ ರಸ್ತೆ, ಬಾಗಲಕೋಟೆ ತಾಲ್ಲೂಕು ಮತ್ತು ಜಿಲ್ಲೆ ಇವರನ್ನು ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್‌ನ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದ್ದು ಶ್ರೀಶೈಲ ಎಂ ದಳವಾಯಿ ನವೆಂಬರ್ 25 ರಂದು ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ ಅಧ್ಯಕ್ಷರಾಗಿ ವಹಿಸಿದಕೊಂಡಿದ್ದಾರೆ. (ಛಾಯಾಚಿತ್ರ ಲಗತ್ತಿಸಿದೆ)

# ಬಡ್ಡಿ ರಹಿತ ಸಾಲಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು, 26 ನೇ ನವೆಂಬರ್ (ಕರ್ನಾಟಕ ವಾರ್ತೆ)**

2014-15 ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳು ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಪೋಸ್ಟ್ ಡಾಕ್ಟ್ರಲ್, ಪಿ.ಹೆಚ್.ಡಿ. ಮಾಸ್ಟರ್ ಡಿಗ್ರಿ, ಉನ್ನತ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡಲು ವಾರ್ಷಿಕ ಗರಿಷ್ಠ ರೂ 3.50 ಲಕ್ಷಗಳಂತೆ, 03 ವರ್ಷಗಳ ಕೋರ್ಸ್‌ನ ಅವಧಿಗೆ ಗರಿಷ್ಠ ರೂ 10.00 ಲಕ್ಷಗಳ ಬಡ್ಡಿರಹಿತ ಸಾಲ ಮಂಜೂರಾತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಭ್ಯರ್ಥಿಯು ಗರಿಷ್ಠ 35 ವರ್ಷಗಳ ವಯೋಮಿತಿಯಲ್ಲಿರಬೇಕು. ಕುಟುಂಬದ ವಾರ್ಷಿಕ ವರಮಾನ ರೂ 1.44 ಲಕ್ಷಗಳನ್ನು ಮೀರಿರಬಾರದು ಹಾಗೂ ಅರ್ಹತಾ ಪರೀಕ್ಷೆಯಲ್ಲಿ ಶೇ 60 ಕ್ಕಿಂತ ಹೆಚ್ಚಿನ ಅಂಕಗಳಿಸಿರಬೇಕು. ಈ ಕಾರ್ಯಕ್ರಮದಡಿ ಈ ಹಿಂದಿನ ಪ್ರಕಟಣೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಿ ಅರ್ಜಿ ಸಲ್ಲಿಸಲು ನಿಗದಿಪಡಿಸಿದ್ದ ಕೊನೆಯ ದಿನಾಂಕದೊಳಗಾಗಿ ನಿಗದಿತ ಸಂಖ್ಯೆಯಲ್ಲಿ ಅರ್ಜಿಗಳು ಸ್ವೀಕೃತಗೊಂಡಿರದ ದಿನಾಂಕ 15-12-2014 ರವರೆಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ವಿಸ್ತರಿಸಲಾಗಿದೆ.

ಈ ಯೋಜನೆಯಲ್ಲಿ ಸೌಲಭ್ಯ ಪಡೆಯಲು ಇಚ್ಛಿಸುವ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಯನ್ನು ಹಾಗೂ ನಿಗದಿತ ಅರ್ಜಿ ನಮೂನೆಗಳನ್ನು ನಿಗಮದ ವೆಬ್‌ಸೈಟ್ 164.100.133.69/dbodc2/ರಲ್ಲಿಯ ಪ್ರಕಟಣೆಯನ್ನು ಗಮನಿಸುವುದು ಹಾಗೂ ಈ ಮೇಲ್ಕಂಡ ಕಚೇರಿಯ ದೂರವಾಣಿ/ಸಹಾಯವಾಣಿ ಸಂಖ್ಯೆ 080-22374832 ಅಥವಾ ಅರ್ಜಿದಾರರು ವಾಸಿಸುತ್ತಿರುವ ಆಯಾ ಜಿಲ್ಲೆಯಲ್ಲಿರುವ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

ಬಾಬು:ಜಿಪಿಆರ್.

# ಫಲಾಪೇಕ್ಷೆ ನಿರೀಕ್ಷಿಸದೆ ಸೇವಾ ಮನೋಭಾವದಿಂದ ಕರ್ತವ್ಯ ನಿರ್ವಹಿಸಲು ಪೋಲೀಸರಿಗೆ ಕರೆ

**ಬೆಂಗಳೂರು, 26 ನೇ ನವೆಂಬರ್ (ಕರ್ನಾಟಕ ವಾರ್ತೆ)**

ತಮ್ಮ ಕೆಲಸಕ್ಕೆ ಫಲಾಪೇಕ್ಷೆ ನಿರೀಕ್ಷಿಸದೆ ಸಾರ್ವಜನಿಕರ ಸೇವೆಯನ್ನು ಸೇವಾ ಮನೋಭಾವದಿಂದ ನಿರ್ವಹಿಸುವಂತೆ ರಾಜ್ಯದ ರಾಜ್ಯಪಾಲ ಶ್ರೀ ವಾಜುಭಾಯಿ ವಾಲಾ ಅವರು ಪೊಲೀಸರಿಗೆ ಕರೆ ನೀಡಿದರು.

ರಾಜಭವನದ ಗಾಜಿನ ಮನೆಯಲ್ಲಿ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯು ಏರ್ಪಡಿಸಿದ್ದ 2014 ನೇ ಸಾಲಿನ ರಾಷ್ಟ್ರಪತಿಯವರ ಪದಕ ಪ್ರಧಾನ ಸಮಾರಂಭದಲ್ಲಿ 47 ಮಂದಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಪದಕ ನೀಡಿ ಗೌರವಿಸಿ ಮಾತನಾಡಿದ ಅವರು ನಾವು ಮಾಡುವ ಯಾವುದೇ ಕೆಲಸವನ್ನು ಶ್ರದ್ಧೆಯಿಂದ ನಿಸ್ವಾರ್ಥವಾಗಿ ಕರ್ತವ್ಯ ನಿರ್ವಹಿಸುವ ಜೊತೆಗೆ ಕೆಲಸಕ್ಕೆ ಸಮಯ ನಿಗದಿ ಪಡಿಸಿಕೊಳ್ಳದೇ ಸೇವಾ ಮನೋಭಾವದಿಂದ ಸಾರ್ವಜನಿಕ ಸೇವೆಯನ್ನು ಮಾಡಬೇಕು. ಫಲಾಪೇಕ್ಷೆಯನ್ನು ಬಯಸುವವರು ತಮ್ಮ ಕರ್ತವ್ಯವನ್ನು ಉತ್ತಮವಾಗಿ ನಿಬಾಯಿಸಲಾರರೆಂದು ತಿಳಿಸಿದರು.

ಕೆಲವು ರಾಜ್ಯಗಳಲ್ಲಿ ರಾತ್ರಿ 10 ಗಂಟೆಯ ನಂತರ ಒಬ್ಬರೇ ಓಡಾಡಲು ಹೆದರುವ ಸ್ಥಿತಿ ಇದ್ದರೆ, ಮತ್ತೆ ಕೆಲವು ರಾಜ್ಯಗಳಲ್ಲಿ ರಾತ್ರಿ 12 ಗಂಟೆಯ ನಂತರವೂ ಒಬ್ಬರೇ ಧೈರ್ಯವಾಗಿ ಓಡಾಡಬಹುದಾಗಿದೆ. ಅಂತಹ ರಾಜ್ಯಗಳ ಸಾಲಿಗೆ ಕರ್ನಾಟಕ ಕೂಡ ಸೇರಬೇಕಾದರೆ ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಯವರ ಪಾತ್ರ ಮಹತ್ವದ್ದು. ತಮ್ಮ ಪ್ರಾಣವನ್ನು ಲಕ್ಷಿಸದೇ ಶೌರ್ಯ ಪ್ರದರ್ಶಿಸಿ ಪದಕ ಪಡೆದವರಲ್ಲಿ ಕರ್ನಾಟಕದವರ ಪಾಲು ಹೆಚ್ಚಿರುವುದು ಹೆಮ್ಮೆಯ ವಿಷಯವೆಂದರು.

ಇದೇ ಸಂದರ್ಭದಲ್ಲಿ ಉಪಸ್ಥಿತರಿದ್ದ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಮಾತನಾಡಿ ಕಾನೂನಿನಲ್ಲಿ ಎಲ್ಲರೂ ಸಮಾನರು. ಕಾನೂನು ಉಲ್ಲಂಘನೆ ಮಾಡುವವರು ಯಾವುದೇ ವರ್ಗಕ್ಕೆ ಸೇರಿದ್ದರೂ ಕಾನೂನು ಮಾತ್ರ ಎಲ್ಲರಿಗೂ ಒಂದೇ. ಆದ್ದರಿಂದ ಪೊಲೀಸರು ಜಾತ್ಯಾತೀತ ಮಹೋಭಾವದಿಂದ ಕಾರ್ಯನಿರ್ವಹಿಸುವ ಮೂಲಕ ಕಾನೂನು ಕೈಗೆತ್ತಿಕೊಳ್ಳುವವರು ಎಷ್ಟೇ ಶಕ್ತಿಶಾಲಿಯಾಗಿದ್ದು, ಹಣ ಬಲ ಹೊಂದಿದ್ದರೂ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ತಿಳಿಸಿದರು.

ಕಾನೂನನ್ನು ಎಲ್ಲರೂ ಗೌರವಿಸಬೇಕು. ಕಾನೂನಿಗೆ ಅಗೌರವ ತೋರಿಸುವವರಿಗೆ ಶಿಕ್ಷೆಯನ್ನು ವಿಧಿಸಿದರೆ ಮಾತ್ರ ಸಮಾಜದಲ್ಲಿ ಶಾಂತಿ ನೆಮ್ಮದಿಯನ್ನು ಕಾಣಲು ಸಾಧ್ಯ. ಇತ್ತೀಚೆಗೆ ಶಾಲಾ ಮಕ್ಕಳು ಮತ್ತು ಸಣ್ಣ ಹೆಣ್ಣು ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯವನ್ನು ಎಸಗುತ್ತಿರುವವರು ಖಂಡಿತವಾಗಿಯೂ ವಿಕೃತ ಮನಸ್ಸಿನವರಾಗಿರುತ್ತಾರೆ. ಇಂತಹ ಹೇಯಕೃತ್ಯ ಪುನರಾವರ್ತನೆಯಾಗುವುದನ್ನು ತಡೆಯಬೇಕಾದರೆ ಅಪರಾದಿಗೆ ಕಠಿಣ ಶಿಕ್ಷೆಯನ್ನು ನೀಡಿದರೆ ಮಾತ್ರ ಸಾಧ್ಯವೆಂದು ಅವರು ಅಭಿಪ್ರಾಯಪಟ್ಟರು.

ಸಮಾಜದಲ್ಲಿ ಸಾರ್ವಜನಿಕರು ಶಾಂತಿ ನೆಮ್ಮದಿಯಿಂದ ಬದುಕಲು ಪೊಲೀಸ್ ಇಲಾಖೆಯ ಪಾತ್ರ ಮಹತ್ವದ್ದಾಗಿದೆ. ಆದ್ದರಿಂದ ಇವರ ಸೇವೆಯ ಪ್ರಾಮುಖ್ಯತೆಯನ್ನು ಮನಗಂಡಿರುವ ಸರ್ಕಾರ 94 ಸಾವಿರ ಹುದ್ದೆಗಳನ್ನು ಭರ್ತಿಮಾಡಿದೆ. ರಾಜ್ಯದ ಆರೂವರೆ ಕೋಟಿ ಜನರು ನೆಮ್ಮದಿ ನಿಶ್ಚಿಂತೆ ಹಾಗೂ

ಭಯಭೀತಿಯಿಲ್ಲದೆ ಬದುಕುವಂತಹ ವ್ಯವಸ್ಥೆ ಮಾಡುವ ಜವಾಬ್ದಾರಿ ಪೊಲೀಸ್ ಇಲಾಖೆಯ ಮೇಲಿದೆ ಎಂದರು.

ಪೊಲೀಸರು ಅತ್ಯಂತ ಕ್ಲಿಷ್ಟ ಪರಿಸ್ಥಿತಿಯಲ್ಲಿ ಹಾಗೂ ಒತ್ತಡದಲ್ಲಿ ಕೆಲಸ ಮಾಡಬೇಕಾಗುತ್ತದೆ. ಅಂತಹ ಸಂದರ್ಭಗಳಲ್ಲಿ ಅವರು ತಮ್ಮ ಪ್ರಾಣದ ಹಂಗನ್ನು ತೊರೆದು ಕರ್ತವ್ಯ ನಿರ್ವಹಿಸಬೇಕಾಗುತ್ತದೆ. ಅಂತಹ ಶೌರ್ಯ ಪ್ರದರ್ಶಿಸಿದ ಪೊಲೀಸ್ ಅಧಿಕಾರಿ ಸಿಬ್ಬಂದಿಗಳನ್ನು ಗುರುತಿಸುವುದು ಪೊಲೀಸ್ ಇಲಾಖೆ ಮಾತ್ರವಲ್ಲ ಸರ್ಕಾರ ಹಾಗೂ ಸಮಾಜದ ಕೆಲಸ ಕೂಡ ಎಂದು ತಿಳಿಸಿದರು.

ಯಾವುದೇ ಹುದ್ದೆಯಲ್ಲಿ ಕಾರ್ಯನಿರ್ವಹಿಸಿದರೂ ಸೇವಾ ಅವಧಿಯಲ್ಲಿ ತಾರತಮ್ಯ ಮಾಡದೆ ದಕ್ಷತೆಯಿಂದ ಕಾರ್ಯನಿರ್ವಹಿಸಿದ್ದೇನೆಂಬ ತೃಪ್ತಿ ನಿವೃತ್ತಿಯ ನಂತರ ತಮಗೆ ಬಂದರೆ ಅದಕ್ಕಿಂತ ದೊಡ್ಡ ಸಾಧನೆ ಬೇರೆ ಇಲ್ಲ ಎಂದರು.

ಗೃಹ ಸಚಿವ ಶ್ರೀ ಕೆ.ಜೆ. ಜಾರ್ಜ್ ಅವರು ಮಾತನಾಡಿ ತಮ್ಮ ಸೇವಾವಧಿಯಲ್ಲಿ ಶ್ಲಾಘನೀಯ ಸೇವೆ ಸಲ್ಲಿಸಿರುವ ಅಧಿಕಾರಿ ಸಿಬ್ಬಂದಿಯವರನ್ನೇ ಶೌರ್ಯ ಪ್ರಶಸ್ತಿಗೆ ಸರ್ಕಾರ ಶಿಫಾರಸ್ಸು ಮಾಡಿದೆಯಲ್ಲದೆ ಅವರ ಸೌಲಭ್ಯಕ್ಕಾಗಿ 1800 ಕೋಟಿ ರೂ. ವೆಚ್ಚದಲ್ಲಿ 2ವರ್ಷದಲ್ಲಿ 11 ಸಾವಿರ ಮನೆಗಳನ್ನು, 6 ವಸತಿ ಶಾಲೆಗಳನ್ನು ನಿರ್ಮಿಸಲಾಗುವುದು. ಅಂತರರಾಷ್ಟ್ರೀಯ ಕ್ರೀಡೆಯಲ್ಲಿ ಪಾಲ್ಗೊಳ್ಳುವವರಿಗೆ ಪ್ರೋತ್ಸಾಹ ನೀಡುವ ಜೊತೆಗೆ ಎಲ್ಲರಿಗೂ ಆರೋಗ್ಯ ಯೋಜನೆಯನ್ನು ಅಳವಡಿಸಲಾಗುವುದೆಂದರು.

ಪೊಲೀಸ್ ಮಹಾ ನಿರ್ದೇಶಕ ಶ್ರೀ ಲಾಲ್ ರುಕುಮ್ ಪಚಾವೋ ಅವರು ಸ್ವಾಗತಿಸಿದರು. ಸರ್ಕಾರದ ಮುಖ್ಯ ಕಾರ್ಯದರ್ಶಿ ಶ್ರೀ ಕೌಶಿಕ್ ಮುಖರ್ಜಿ, ಗೃಹ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಶ್ರೀ ಎಸ್. ಕೆ. ಪಟ್ನಾಯಕ್ ಮತ್ತಿತರರು ಉಪಸ್ಥಿತರಿದ್ದರು.

ಬಾಬು:ಬಿಜಿಪಿ:ಜಿಪಿಆರ್.